# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 775 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 21.02.2024 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕಂದಾಯ ಗ್ರಾಮಗಳು, ತಾಂಡಾ ಮತ್ತು ಕಂದಾಯೇತರ ಗ್ರಾಮಗಳಲ್ಲಿ ವಾಸಿಸುವ ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯಗಳ ಜನರ ಉತ್ತರಕ್ರಿಯಾದಿ ಶವಸಂಸ್ಕಾರಕ್ಕಾಗಿ ಪ್ರತ್ಯೇಕವಾದ ಸ್ಮಶಾನದ ವ್ಯವಸ್ಥೆ ಇರುವ ಗ್ರಾಮಗಳೆಷ್ಟು; ಈ ವ್ಯವಸ್ಥೆ ಇಲ್ಲದ ಗ್ರಾಮಗಳೆಷ್ಟು; (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71ರಡಿ ಪ್ರದತ್ತವಾದ ಅಧಿಕಾರದನ್ವಯ ಜಿಲ್ಲಾಧಿಕಾರಿಗಳು ರಾಜ್ಯದಲ್ಲಿ ಸರ್ಕಾರಿ ಜಮೀನು ಲಭ್ಯವಿರುವ ಕಡೆ ಸೂಕ್ತವಾದ ಜಮೀನನ್ನು ಸ್ಮಶಾನದ ಉದ್ದೇಶಕ್ಕಾಗಿ ಕಾಯ್ದಿರಿಸುವಂತೆ ತಿಳಿಸಲಾಗಿದೆ. ಒಂದು ವೇಳೆ ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆ ಖಾಸಗಿಯವರಿಂದ ಜಮೀನನ್ನು ಖರೀದಿಸಿ ಸ್ಮಶಾನದ ಉದ್ದೇಶಕ್ಕಾಗಿ ಕಾಯ್ದಿರಿಸಿ ಸಾರ್ವಜನಿಕ ಸ್ಮಶಾನ ಎಂದು ನಾಮಫಲಕ ಹಾಕುವಂತೆ ತಿಳಿಸಲಾಗಿದ್ದು, ಅದರಂತೆ, ರಾಜ್ಯದಲ್ಲಿರುವ ಎಲ್ಲಾ ಗ್ರಾಮಗಳಿಗೂ ಸ್ಮಶಾನ ಉದ್ದೇಶಕ್ಕಾಗಿ ಭೂಮಿಯನ್ನು ಒದಗಿಸಲಾಗಿರುತ್ತದೆ. ಸ್ಮಶಾನ ಉದ್ದೇಶಕ್ಕಾಗಿ ಜಮೀನು ಮಂಜೂರು ಮಾಡುವಂತೆ ಕೋರಿಕೆಗಳು ಸ್ವೀಕೃತವಾದಲ್ಲಿ ಜಮೀನು ಮಂಜೂರು ಮಾಡಲು / ಕಾಯ್ದಿರಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |
| ಆ) | ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯಗಳ ಜನರಿಗೆ ಉತ್ತರಕ್ರಿಯಾದಿ ಶವಸಂಸ್ಕಾರಕ್ಕಾಗಿ ಪ್ರತ್ಯೇಕವಾದ ಸ್ಮಶಾನದ ವ್ಯವಸ್ಥೆಯಿಲ್ಲದಿರುವ ಕಂದಾಯ ಗ್ರಾಮಗಳು, ತಾಂಡಾ ಮತ್ತು ಕಂದಾಯೇತರ ಗ್ರಾಮಗಳಲ್ಲಿ ಸ್ಮಶಾನದ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು; (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು) | |
| ಇ) | ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯಗಳ ಜನರ ಉತ್ತರಕ್ರಿಯಾದಿ ಶವಸಂಸ್ಕಾರಗಳು ನಡೆಸುವಲ್ಲಿ ಅವರು ಅನುಭವಿಸುವ ಕಷ್ಟ-ಪಾಡುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | |

ಸಂಖ್ಯೆ: ಆರ್‌ಡಿ 34 ಎಲ್‌ಜಿಕ್ಯೂ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು